# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ತಾಲ್ಲೂಕು ಪಂಚಾಯತ್‌ಗಳ ಮತ್ತು ಅವುಗಳ ವ್ಯಾಪ್ತಿಯ ಇತರೆ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರುಗಳ ವೇತನ ವೆಚ್ಚಕ್ಕಾಗಿ ಹಾಗೂ ತೆರವಾದ ಹುದ್ದೆಗಳಿಗೆದುರಾಗಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸಂಭಾವನೆಗಾಗಿ ಹಾಗೂ ಅಗತ್ಯ ವೇತನೇತರ ವೆಚ್ಚಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಪತ್ರಗಳು

**ಪ್ರಸ್ತಾವನೆ:**

ವಿವಿಧ ತಾಲ್ಲೂಕು ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯವರುಗಳ ವೇತನ/ಬಾಕಿ ವೇತನ ಪಾವತಿಗಾಗಿ, ತೆರವಾಗಿರುವ ಹುದ್ದೆಗಳಿಗೆದುರಾಗಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸಂಭಾವನೆಗಾಗಿ ಹಾಗೂ ಅಗತ್ಯ ವೇತನೇತರ ವೆಚ್ಚಗಳಿಗಾಗಿ ವಿವಿಧ ಲೆಕ್ಕ ಶೀರ್ಷಿಕೆಗಳ ಕಾರ್ಯಕ್ರಮದಡಿ ಒಟ್ಟು ರೂ.529.27ಲಕ್ಷಗಳ ಹೆಚ್ಚುವರಿ ಅನುದಾನವನ್ನು ಕೋರಿದ್ದು, ಕೋರಿರುವ ಹೆಚ್ಚುವರಿ ಅನುದಾನವನ್ನು ಲೆಕ್ಕ ಶೀರ್ಷಿಕೆ 2515-00-197-1-10-300 ಅಡಿ ಲಭ್ಯವಿರುವ ಅನುದಾನದಿಂದ ರೂ.529.27ಲಕ್ಷಗಳನ್ನು ಬಿಡುಗಡೆಗೊಳಿಸಲು ನಿರ್ಣಯಿಸಲಾಗಿದೆ. ಅದರನ್ವಯ ಕೆಳಕಂಡಂತೆ ಆದೇಶಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 54 ವೆಚ್ಚ 6/2018 ದಿನಾಂಕ: 24ನೇ ಜನವರಿ 2018

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2 ತಾಲ್ಲೂಕು ಪಂಚಾಯತ್‌ಗಳಿಗೆ ಕಾಲಂ 3 ಕಾರ್ಯಕ್ರಮದಡಿಯಲ್ಲಿ ಕಾಲಂ 4ರನ್ವಯ 2515-00-197-1-10-300 ಅಡಿ ಕಾಲಂ 5ರಂತೆ ಒಟ್ಟು ಅನುದಾನ ರೂ.529.27ಲಕ್ಷ (ರೂಪಾಯಿ ಐದು ನೂರ ಇಪ್ಪತ್ತೊಂಬತ್ತು ಲಕ್ಷದ ಇಪ್ಪತ್ತೇಳು ಸಾವಿರಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಲಾಗಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1)ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿದ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರುರವರಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಸಲ್ಲಿಸಿ ಖಜಾನೆಯಲ್ಲಿ ಅಪ್‌ಲೋಡ್ ಮಾಡಿಕೊಳ್ಳುವುದು)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ),
ಆರ್ಥಿಕ ಇಲಾಖೆ

1. ಮಹಾಲೇಖಪಾಲರು (ಎ&ಇ), ಲೆಕ್ಕ ಪರಿಶೋಧನೆ 1&2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾ.ಅ.ಪ./ಶಿಕ್ಷಣ/ಸಮಾಜ ಕಲ್ಯಾಣ/ಕೃಷಿ/ಪಶು ಸಂಗೋಪನೆ/ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ
3. ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು,
4. ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
5. ಸಂಬಂಧಪಟ್ಟ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು,
6. ಸಂಬಂಧಪಟ್ಟ ಜಿಲ್ಲಾ/ಉಪ ಖಜಾನೆ ಅಧಿಕಾರಿಗಳು
7. ರಕ್ಷಾ ಕಡತಕ್ಕೆ
8. ಹೆಚ್ಚುವರಿ ಪ್ರತಿ